ದಿನಾಂಕ: 02.01.2021 ರಂದು ಮಧ್ಯಾಹ್ನ 3.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ **ಶ್ರೀ ಲಿಂಗಣ್ಣ ಗುಂಡಳ್ಳಿ**, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ನಾಗರಾಜ್.ಕೆ.ವಿ. ಸಹಾಯಕ ಅಭಿಯಂತರರು, ಬಿ.ಡ್ಬ್ಲ್ಯೂಎಸ್.ಎಸ್.ಬಿ.
3. ಶ್ರೀ ಆನಂದ್, ಸಹಾಯಕ ಅಭಿಯಂತರರು , ಬೆಸ್ಕಾಂ,
4. ಶ್ರೀ ಹರೀಶ್ ನಾಯಕ್, ಬಿ.ಡಬ್ಲ್ಯೂಎಸ್.ಎಸ್.ಬಿ.
5. ಶ್ರೀಮತಿ ರೇಷ್ಮ.ಸಿ.ಎಸ್. ಸಹಾಯಕ ಅಭಿಯಂತರರು, ದೊಡ್ಡ ಮಳೆನೀರು ಚರಂಡಿ,
6. ಶ್ರೀ ಶಿವಕುಮಾರ್ , ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ರಮೇಶ್, ಪಶು ಸಂಘೋಪನಾ ಇಲಾಖೆ
8. ಶ್ರೀ ವೆಂಕಟೇಶ್‌ಮೂರ್ತಿ, ಕಂದಾಯ ವಸೂಲಿಗಾರರು
9. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು
10. ಶ್ರೀ ವಿಶಾಲ್, ಮಾರ್ಷಲ್
11. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ ಕೇಶವ ಮೂರ್ತಿ ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸಲು ತಿಮ್ಮಯ್ಯ ರಸ್ತೆ ಮತ್ತು ಮಹಾಗಣಪತಿನಗರದಲ್ಲಿ ರಸ್ತೆಗಳನ್ನು ಕತ್ತರಿಸಿದ್ದು, ಸದರಿ ರಸ್ತೆಗಳನ್ನು ಯಥಾಸ್ಥಿತಿಗೆ ತರುವ ಕಾಮಗಾರಿಯನ್ನು ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಸಹಾಯಕ ಅಭಿಯಂತರರು, ಸದರಿ ಕಾಮಗಾರಿಯನ್ನು ಪರಿಶೀಲಿಸಿ, ಗುತ್ತಿಗೆದಾರರಿಗೆ ಗುಣಮಟ್ಟದ ಕಾಮಗಾರಿಯನ್ನು ನಿರ್ವಹಿಸಲು ಸೂಚಿಸಲಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

2. ತಿಮ್ಮಯ್ಯ ರಸ್ತೆಯಲ್ಲಿರುವ ಶ್ರೀನಿಧಿ ಅಪಾರ್ಟ್‌ಮೆಂಟ್ ರವರು ಒಳಚರಂಡಿ ಸಂಪರ್ಕವನ್ನು ದೊಡ್ಡ ಮಳೆನೀರು ಚರಂಡಿಗೆ ಬಿಟ್ಟಿರುವುದು ಕಂಡು ಬಂದಿರುತ್ತದೆ. ಆದುದರಿಂದ ಸದರಿ ಅಪಾರ್ಟ್‌ಮೆಂಟ್ ರವರ ಮೇಲೆ ಕ್ರಮ ತೆಗೆದುಕೊಳ್ಳಬೇದೆಂದು ಸಭೆಯಲ್ಲಿ ಸಾರ್ವಜನಿಕರು ಕೋರಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಶ್ರೀಮತಿ ರೇಷ್ಮ.ಸಿ.ಎಸ್. ಸಹಾಯಕ ಅಭಿಯಂತರರು, ದೊಡ್ಡ ಮಳೆನೀರು ಚರಂಡಿ ಈಗಾಗಲೇ ಅಪಾರ್ಟ್‌ಮೆಂಟ್ ಅಸೋಸಿಯೇಷನ್ ರವರಿಗೆ ನೋಟಿಸ್ ಜಾರಿ ಮಾಡಲಾಗಿರುತ್ತದೆ. ಮತ್ತು ಸದರಿ ವಿಷಯದ ಬಗ್ಗೆ ಬಿ.ಡಬ್ಲ್ಯೂಎಸ್.ಎಸ್.ಬಿ. ರವರಿಗೆ ಪತ್ರ ಬರೆದು ಒಳಚರಂಡಿ ಸಂಪರ್ಕವನ್ನು ದೊಡ್ಡ ಮಳೆ ನೀರು ಚರಂಡಿಗೆ ಬಿಟ್ಟಿರುವುದರಿಂದ ಸದರಿ ರವರ ಮೇಲೆ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು.

3. ನೋಡಲ್ ಅಧಿಕಾರಿಗಳು ಮಾತನಾಡುತ್ತ, ಪಶ್ಚಿಮ ಕಾರ್ಡ್ ರಸ್ತೆಯಲ್ಲಿರುವ ನಂದನ ಪ್ಯಾಲೇಸ್ ಹೋಟೆಲ್ ರವರು ಕಸವನ್ನು ರಸ್ತೆಗೆ ಹಾಕುತ್ತಿದ್ದು, ಇದರಿಂದ ಬ್ಲಾಕ್ ಸ್ಪಾಟ್ ಆಗುವ ಸಂಭವವಿರುತದೆ ಎಂದು ಸ್ಥಳೀಯ ನಿವಾಸಿಗಳು ದೂರುತ್ತಿರುವುದರಿಂದ, ಸದರಿ ಹೋಟೆಲ್ ಮಾಲೀಕರ ಮೇಲೆ ಕ್ರಮ ಕೈಗೊಳ್ಳುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

4. ತಿಮ್ಮಯ್ಯ ರಸ್ತೆಯಲ್ಲಿರುವ ಸೌತ್ ಹೋಟೆಲ್ ಪಕ್ಕದಲ್ಲಿರುವ ಖಾಲಿ ಜಾಗದಲ್ಲಿ ಬಾಟಲ್‌ಗಳು ಹಾಗೂ ಕಸವನ್ನು ಹಾಕುತ್ತಿರುವುದರಿಂದ ಅಕ್ಕಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದರಿಂದ ಸದರಿ ಹೋಟೆಲ್ ಮಾಲೀಕರಿಗೆ ನೋಟಿಸ್ ಜಾರಿ ಮಾಡಲು ನೋಡಲ್ ಅಧಿಕಾರಿಗಳು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

**ಪು.ತಿ.ನೋ.**

Scanned with CamScanner

5. ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಮಾತನಾಡುತ್ತಾ, ಕಸವನ್ನು ಎಲ್ಲೆಂದರಲ್ಲಿ ಎಸೆಯುವ ನಾಗರೀಕರಿಗೆ ದಂಡವನ್ನು ವಿಧಿಸಬೇಕೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಈಗಾಗಲೇ ಕಸವನ್ನು ಎಸೆಯುವವರ ಮೇಲೆ ದಂಡವನ್ನು ವಿಧಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು
ವಾರ್ಡ್ ನಂ. 107

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ. ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner